RNU AIR DHARWAD

# FEBRUARY 13,2025
# ALL INDIA RADIO- DHARWAD
# PRADESH SAMACHARA (KANNADA) 12PM

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

**ಓದಿದವವರು: ವಿವೇಕಾದಿತ್ಯ ಕನಿಯಾಲ**

<><><>

**ಮಹಾರಾಷ್ಟ್ರ, ಕೇರಳ ಸೇರಿದಂತೆ,** ಇತರೆ ರಾಜ್ಯಗಳೊಂದಿಗೆ ಗಡಿ ಹಂಚಿಕೊಂಡಿರುವ, ಕರ್ನಾಟಕ ಗಡಿ ಭಾಗದ ಮಕ್ಕಳ ಕಲಿಕೆ ಹಾಗೂ ಕನ್ನಡ ಭಾಷೆ ಬೆಳವಣಿಗೆಗೆ, ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ, ಸೂಕ್ತ ಅನುದಾನ ಒದಗಿಸಿದೆ ಎಂದು, ಪ್ರಾಧಿಕಾರದ ಅಧ್ಯಕ್ಷ ಸೋಮಣ್ಣ ಬೇವಿನಮರದ ತಿಳಿಸಿದ್ದಾರೆ. ಯಾದಗಿರಿ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ, ವಿವಿಧ ಯೋಜನೆಗಳ ಪ್ರಗತಿ ಪರಿಶೀಲಿಸಿ, ಅವರು ಮಾತನಾಡಿದರು.  ಜಿಲ್ಲೆಯ ಗಡಿ ಭಾಗದಲ್ಲಿ, ಪ್ರಾಧಿಕಾರದ ಅನುದಾನ ಬಳಸಿ, ಕಾಮಗಾರಿ ಕೈಗೊಂಡಿದ್ದರೂ, ಬಳಕೆ ಪ್ರಮಾಣಪತ್ರ ಸಲ್ಲಿಸದಿರುವುದು; ಕಾಮಗಾರಿಯನ್ನು, ಪೂರ್ಣಗೊಳಿಸದೇ ಇರುವುದನ್ನು ಗಂಭೀರವಾಗಿ ಪರಿಗಣಿಸಲಾಗಿದೆ. ಅನುದಾನ ಹಿಂಪಡೆದು, ಅಗತ್ಯ ಇರುವೆಡೆ ಅನುದಾನವನ್ನು ಬಳಸಲು, ತಾವು ನಿರ್ದೇಶಿಸುವುದಾಗಿ, ಅವರು ಸ್ಪಷ್ಟ ಪಡಿಸಿದರು.

<><><>

**ಕರ್ನಾಟಕ ಲಲಿತಾ ಕಲಾ ಅಕಾದೆಮಿಯು** ವಾರ್ಷಿಕ ಪ್ರಶಸ್ತಿಗಳನ್ನು ಇತ್ತೀಚೆಗೆ ಘೋಷಿಸಿದೆ. 2023–24 ನೇ ಸಾಲಿನ ಅಕಾದೆಮಿಯ ಗೌರವ ಪ್ರಶಸ್ತಿಗೆ ಕಲಬುರಗಿ ಜಿಲ್ಲೆ ಕೋಟನೂರು ಗ್ರಾಮದ ಗ್ರಾಫಿಕ್ ಡಿಸೈನರ್, ಬಾಬುರಾವ್ ಹೆಚ್ ಅವರು ಭಾಜನರಾಗಿದ್ದಾರೆ. ಪ್ರದೇಶ ಸಮಾಚಾರದೊಂದಿಗೆ ಅವರು ತಮ್ಮ ಸಂತಸ ಹಂಚಿಕೊಂಡಿದ್ದಾರೆ.

<><><>

**ಜನಪದ ಹಾಡುಗಳನ್ನು ಹಾಡುವ ಮೂಲಕ** ಜನಜಾಗೃತಿ ಮೂಡಿಸುತ್ತಿದ್ದ, ಪದ್ಮಶ್ರೀ ಪ್ರಶಸ್ತಿ ವಿಜೇತ ಉತ್ತರಕನ್ನಡ ಜಿಲ್ಲೆ ಅಂಕೋಲಾ ತಾಲ್ಲೂಕಿನ ಬಡಗೇರಿಯ ಸುಕ್ರಿ ಬೊಮ್ಮ ಗೌಡ ಅವರು  ಇಂದು ಮುಂಜಾನೆ ತಮ್ಮ ಸ್ವಗೃಹದಲ್ಲಿ ನಿಧನರಾದರು. ಅವರಿಗೆ 88 ವರ್ಷ ವಯಸ್ಸಾಗಿತ್ತು. ಕಳೆದ ಕೆಲ ತಿಂಗಳುಗಳಿಂದ ತೀವ್ರ ಅನಾರೋಗ್ಯದಿಂದ ಬಳಲುತ್ತಿದ್ದ ಅವರಿಗೆ, ಮಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಕೊಡಿಸಲಾಗಿತ್ತು. 1999 ರಲ್ಲಿ ಜನಪದಶ್ರೀ ಪ್ರಶಸ್ತಿ, 2006 ರಲ್ಲಿ ನಾಡೋಜ ಪ್ರಶಸ್ತಿ, 2017 ರಲ್ಲಿ ಪದ್ಮಶ್ರೀ ಪ್ರಶಸ್ತಿಗೆ ಅವರು ಭಾಜನರಾಗಿದ್ದರು. ಇವರ ನಿಧನಕ್ಕೆ ಗಣ್ಯರು ಕಂಬನಿ ಮಿಡಿದಿದ್ದು , ಸಂತಾಪ ಸೂಚಿಸಿದ್ದಾರೆ. ಉತ್ತರ ಕನ್ನಡ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿಯವರು ತಮ್ಮ ಶೋಕ ಸಂದೇಶದಲ್ಲಿ, ಪದ್ಮಶ್ರೀ ಪ್ರಶಸ್ತಿ ಪುರಸ್ಕೃತ ಜಾನಪದ ಗಾಯಕಿ, ಹೋರಾಟಗಾರ್ತಿ ಸುಕ್ರಿ ಬೊಮ್ಮ ಗೌಡ ಅವರು ಇಂದು ನಿಧನರಾದ ಸುದ್ದಿ ಕೇಳಿ ಅಘಾತವಾಯಿತು. ನಾಡೋಜಾ ಪ್ರಶಸ್ತಿ ಪುರಸ್ಕೃತರಾಗಿದ್ದ ಅವರು ಹಾಲಕ್ಕಿ ಜನಪದ ಹಾಡುಗಳನ್ನು ಹಾಡುವ ಮೂಲಕ ಚಿರಪರಿಚಿತರಾಗಿದ್ದರು. ಅವರ ಕುಟುಂಬ ವರ್ಗದವರಿಗೆ ಮತ್ತು ಅಭಿಮಾನಿಗಳಿಗೆ, ಬಂಧುಗಳಿಗೆ ಹಾಗೂ ಸಮುದಾಯದವರಿಗೆ ದುಃಖವನ್ನು ಭರಿಸುವ ಶಕ್ತಿಯನ್ನು ನೀಡಲಿ ಮತ್ತು ಅವರ ಆತ್ಮಕ್ಕೆ ಚಿರಶಾಂತಿ ದೊರಕಲಿ ಎಂದು ತಮ್ಮ  ಸಂತಾಪ ಸೂಚಿಸಿದ್ದಾರೆ.

<><><>

**ಶಿವಮೊಗ್ಗ ಜಿಲ್ಲೆಯ ಜಡೆಯಿಂದ,** ಉತ್ತರಕನ್ನಡ ಜಿಲ್ಲೆಯ ಬನವಾಸಿ ಮತ್ತು ಈಸೂರಿನಿಂದ ಅಂಜನಾಪುರದ ವರೆಗೆ, 110 ಕಿಲೋ ವ್ಯಾಟ್ ಸಾಮರ್ಥ್ಯದ, ವಿದ್ಯುತ್ ಪ್ರಸರಣ ಮಾರ್ಗ ಅನುಷ್ಠಾನಗೊಳ್ಳಲಿದೆ ಎಂದು, ಜಿಲ್ಲಾ ಉಸ್ತುವಾರಿ ಸಚಿವ ಮಧು ಬಂಗಾರಪ್ಪ ತಿಳಿಸಿದ್ದಾರೆ. ಲೋಕೋಪಯೋಗಿ ಭವನದಲ್ಲಿ, ವಿವಿಧ ಇಲಾಖೆಗಳ ಪ್ರಗತಿ ಪರಿಶೀಲಿಸಿದ ಅವರು, ಯೋಜನೆ ಅನುಷ್ಠಾನ ಮಾರ್ಗದ ವ್ಯಾಪ್ತಿಯ ರೈತರೊಂದಿಗೆ, ಮೆಸ್ಕಾಂ ಅಧಿಕಾರಿಗಳು ಹಾಗೂ ಜಿಲ್ಲಾಧಿಕಾರಿಗಳು ಸಮಾಲೋಚಿಸಿ, ರೈತರ ಹಿತ ಕಾಯ್ದು, ಯೋಜನೆ ಅನುಷ್ಠಾನಕ್ಕೆ ಮುಂದಾಗುವಂತೆ, ಸೂಚಿಸಿದರು.

<><><>

**ರಾಜ್ಯದಲ್ಲಿ ತುರ್ತು ಪಶು ಚಿಕಿತ್ಸೆಗೆ** ಅಗತ್ಯವಾದ, ತಾಲೂಕುವಾರು ಮೊಬೈಲ್ ಪಶು ಚಿಕಿತ್ಸಾ ವಾಹನಗಳನ್ನು ನೀಡಲಾಗಿದೆ ಹಾಗೂ ಇಲಾಖೆ ವತಿಯಿಂದ ಪಶು ವೈದ್ಯರ ಹಾಗೂ ಸಿಬ್ಬಂದಿಗಳ ನೇಮಕಕ್ಕೆ ಕ್ರಮ ಕೈಗೊಳ್ಳಲಾಗಿದೆ ಎಂದು ರಾಜ್ಯ ಪಶುಸಂಗೋಪನಾ ಮತ್ತು ರೇಷ್ಮೇ ಇಲಾಖೆ ಸಚಿವ ಕೆ.ವೆಂಕಟೇಶ ಹೇಳಿದರು.  ಹಾವೇರಿಯಲ್ಲಿ ಜಿಲ್ಲಾ ಪಶುರೋಗ ಪ್ರಯೋಗಾಲಯ ಮತ್ತು ಮಾಹಿತಿ ಕೇಂದ್ರದ ನೂತನ ಕಟ್ಟಡವನ್ನು ಉದ್ಘಾಟಿಸಿ ಅವರು ಮಾತನಾಡಿದರು. ರಾಣೆಬೇನ್ನೂರು ತಾಲೂಕಿನ ಕೂನಬೇವಿನಲ್ಲಿ ಸುಮಾರು 15 ಕೋಟಿ ರೂಪಾಯಿ ವೆಚ್ಚದ ರೇ   ್ಮ ಮೆಗಾ ಮಾರುಕಟ್ಟೆ ನಿರ್ಮಿಸಲಾಗುತ್ತಿದೆ ಎಂದು ಸಚಿವರು ಹೇಳಿದರು.

<><><>

**ಗಣಿ ಬಾಧಿತ ಪ್ರದೇಶದ** ಕುಟುಂಬಗಳಿಗೆ, ಆದ್ಯತೆ ಮೇರೆಗೆ ಮೂಲ ಸೌಕರ್ಯ ಕಲ್ಪಿಸಲು, ರಾಜ್ಯ ಗಣಿ ಪರಿಸರ ಪುನಃಶ್ಚೇತನ ನಿಗಮದ, ವ್ಯವಸ್ಥಾಪಕ ನಿರ್ದೇಶಕ, ಸಂಜಯ ಬಿಜ್ಜೂರ ಸೂಚಿಸಿದ್ದಾರೆ. ತುಮಕೂರು ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ, ಪ್ರಗತಿ ಪರಿಶೀಲನಾ ಸಭೆಯಲ್ಲಿ, ಅವರು, ಮಾತನಾಡಿದರು. ಗಣಿ ಬಾಧಿತ ಪ್ರದೇಶಗಳಲ್ಲಿ, ಆರೋಗ್ಯ, ಶಿಕ್ಷಣ, ಪರಿಸರ ಸಂರಕ್ಷಣೆ ಮತ್ತು ಜನರ ಜೀವನ ಮಟ್ಟ ಸುಧಾರಣೆಗಾಗಿ ಆದ್ಯತೆ ನೀಡಬೇಕು. ಆರ್ಥಿಕವಾಗಿ ಹಿಂದುಳಿದವರಿಗೆ ಮಾತ್ರ, ಗಣಿ ಬಾಧಿತ ಯೋಜನೆಗಳ ಫಲಾನುಭವಿಯಾಗಿ ಆಯ್ಕೆ ಮಾಡಬೇಕು ಎಂದರು.

<><><>